ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 17–12–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಕನ್ನಡ ಸಾಹಿತ್ಯ ಪರಿಷತ್ತಿನಿಂದ "ನೃಪತುಂಗ ಪ್ರಶಸ್ತಿ ಪುರಸ್ಕೃತರ ಬದುಕು–ಬರಹ ವಿಚಾರ ಸಂಕಿರಣ:<br><br>ಸಮಾರೋಪ ಸಮಾರಂಭ:<br><br>ಡಾ: ಕೆ. ಮರುಳಸಿದ್ಧಪ್ಪ<br>ಹಿರಿಯ ಸಾಹಿತಿ<br><br>ಮುಖ್ಯ ಅತಿಥಿ:<br><br>ಡಾ: ಶಾಲಿನಿ ರಜನೀಶ್,<br>ಪ್ರಧಾನ ಕಾರ್ಯದರ್ಶಿಗಳು,<br>ಕನ್ನಡ ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ | 18–12–2014<br><br>ಗುರುವಾರ<br>ಸಂಜೆ<br>4–00 ಗಂಟೆಗೆ | ಗಾಯನ ಸಮಾಜ,<br><br>ಕೆ.ಆರ್. ರಸ್ತೆ,<br><br>ಬೆಂಗಳೂರು |
| 2 | ಪತ್ರಿಕಾಗೋಷ್ಠಿ:<br>ಬಲ್ಕೀಸ್ ಬಾನು,<br>ಅಧ್ಯಕ್ಷರು,<br>ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು | 18–12–2014<br>ಗುರುವಾರ<br>ಸಂಜೆ<br>4–00 ಗಂಟೆಗೆ | 5 ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,<br>ಕಾಫಿಬೋರ್ಡ್ ಎದುರು,<br>ಡಾ: ಅಂಬೇಡ್ಕರ್ ವೀದಿ, ಬೆಂಗಳೂರು – 560 001 |
| **3** | **Press Conference:**<br><br>**Hon'ble Justice N.K. Patil,**<br><br>**Judge, High Court of Karnataka and Executive Chairman, Karnataka State Legal Services** | **18-12-2014**<br><br>**Thursday**<br><br>**5.00 P.M.** | **Executive Chairman Hall,**<br><br>**I Floor, High Court Building, Bengaluru-560 001** |

| | Authority | | |
|---|---|---|---|

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ನಿರೂಪಣೆ ಹಾಗೂ ವಾರ್ತಾ ವಾಚಕರ ತರಬೇತಿ ಶಿಬಿರ

**ಬೆಂಗಳೂರು, ಡಿಸೆಂಬರ್ 17 (ಕರ್ನಾಟಕ ವಾರ್ತೆ)**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಯುವತಿಯರಿಗಾಗಿ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ "ನಿರೂಪಣೆ ಹಾಗೂ ವಾರ್ತಾ ವಾಚಕರ" ಉಚಿತ ತರಬೇತಿ ಶಿಬಿರವನ್ನು ದಿನಾಂಕ 29-12-2014 ರಿಂದ 3-1-2015 ರವರೆಗೆ ಬೆಂಗಳೂರಿನ ನೃಪತುಂಗ ರಸ್ತೆಯಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಜ್ಯ ಯುವ ಕೇಂದ್ರದಲ್ಲಿ ಏರ್ಪಡಿಸಿದೆ.

ತರಬೇತಿ ಶಿಬಿರವು 6 ದಿನಗಳ ಕಾಲ ನಡೆಯಲಿದ್ದು, ವಯೋಮಾನ 15 ರಿಂದ 35 ವರ್ಷದೊಳಗಿನ ಯುವಕ/ಯುವತಿಯರು ಭಾಗವಹಿಸಲು ಅರ್ಹರು. ಪ್ರವೇಶ ಉಚಿತ. ಆಸಕ್ತ ಯುವಕ/ಯುವತಿಯರು ಡಿಸೆಂಬರ್ 26 ರೊಳಗಾಗಿ ಸಹಾಯಕ ನಿರ್ದೇಶಕರು, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು ಇವರಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 080-22214911 ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಕಟಣೆ ತಿಳಿಸಿದೆ.

**ಪಹೊ/ಕೆಎಂ**

## ಶಿವಮೊಗ್ಗ, ಹಾಸನ ಪಶುವೈದ್ಯಕೀಯ ಕಾಲೇಜಿಗೆ ಮಾನ್ಯತೆ

**ಬೆಂಗಳೂರು, ಡಿಸೆಂಬರ್ 17 (ಕರ್ನಾಟಕ ವಾರ್ತೆ)**

ಶಿವಮೊಗ್ಗ ಮತ್ತು ಹಾಸನ ಪಶುವೈದ್ಯಕೀಯ ಮಹಾವಿದ್ಯಾಲಯಗಳ ಮೂಲಭೂತ ಸೌಕರ್ಯಗಳ ಪ್ರಗತಿಯನ್ನು ಪರಿಗಣಿಸಿ, ಭಾರತೀಯ ಪಶುವೈದ್ಯಕೀಯ ಪರಿಷತ್ತಿನ ಶಿಫಾರಸ್ಸಿನ ಮೇರೆಗೆ ಕೇಂದ್ರ ಸರ್ಕಾರವು ಕೃಷಿ ಮಂತ್ರಾಲಯವು, ಈ ಎರಡು ಕಾಲೇಜಿಗೆ ಮಾನ್ಯತೆ ನೀಡಿದೆ.

ಈ ಮಾನ್ಯತೆಯಿಂದ ಶಿವಮೊಗ್ಗ ಮತ್ತು ಹಾಸನ ಪಶುವೈದ್ಯಕೀಯ ಮಹಾವಿದ್ಯಾಲಯಗಳಿಂದ ಪಡೆದ ಬಿ.ವಿ.ಎಸ್.ಸಿ. ಮತ್ತು ಎ.ಹೆಚ್. ಪದವಿಯು ಭಾರತೀಯ ಪಶುವೈದ್ಯಕೀಯ ಪರಿಷತ್ತಿನ ಅಧಿನಿಯಮ 1984 ರ ಷೆಡ್ಯೂಲ್ -1 ರಲ್ಲಿ ಸೇರ್ಪಡೆಯಾಗಿದ್ದು ಸದರಿ ಕಾಲೇಜುಗಳ ಎಲ್ಲಾ ಪದವೀದರರು ಕರ್ನಾಟಕ ಪಶುವೈದ್ಯಕೀಯ ಪರಿಷತ್ತು ಬೆಂಗಳೂರು ಇಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ಪಶು ವೈದ್ಯಕೀಯ ಪರಿಷತ್ತು ಪ್ರಕಟಣೆಯಲ್ಲಿ ತಿಳಿಸಿದೆ.

ಪಹೊ/ಕೆಎಂ

## ಅಲ್ಪ ಸಂಖ್ಯಾತರ ಅಭ್ಯರ್ಥಿಗಳಿಗೆ ನರ್ಸಿಂಗ್ ತರಬೇತಿ ಭತ್ಯೆ ಮಂಜೂರು

**ಬೆಂಗಳೂರು, ಡಿಸೆಂಬರ್ 17 (ಕರ್ನಾಟಕ ವಾರ್ತೆ)**

ಜಿಎನ್‌ಎಂ ಮತ್ತು ಬಿಎಸ್‌ಸಿ ನರ್ಸಿಂಗ್ ತರಬೇತಿ ಪಡೆಯುತ್ತಿರುವ ಮತೀಯ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ತರಬೇತಿ ಭತ್ಯೆ ಮಂಜೂರಾತಿಗಾಗಿ 2014-15 ನೇ ಸಾಲಿಗೆ ಅರ್ಜಿಗಳನ್ನು ಆಹ್ವಾನಿಸಿದೆ. ಅರ್ಹ ಅಭ್ಯರ್ಥಿಗಳು ಸಂಬಂಧಪಟ್ಟ ಕಾಲೇಜು ಪ್ರಾಂಶುಪಾಲರ ಮುಖಾಂತರ ಅರ್ಜಿಗಳನ್ನು ಡಿಸೆಂಬರ್ 30 ರೊಳಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ 21 ನೇ ಮಹಡಿ, ಡಾ: ಅಂಬೇಡ್ಕರ್ ವೀದಿ, ಬೆಂಗಳೂರು -1 ಇವರನ್ನು ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಬಾಗಲಕೋಟೆಯಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಸರ್ಕಾರ ಸಿದ್ಧ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಬಾಗಲಕೋಟೆ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಸರ್ಕಾರ ಸಿದ್ಧವಿದೆ ಎಂದು ಜವಳಿ ಸಚಿವ ಬಾಬುರಾವ್ ಚಿಂಚಸನೂರ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಜಿ.ಎಸ್.ನ್ಯಾಮಗೌಡ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಸರ್ಕಾರ ಬಾಗಲಕೋಟೆ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಸಿದ್ಧವಿದ್ದು, ಜವಳಿ ಪಾರ್ಕ್ ಸ್ಥಾಪನಗೆ ಬೇಕಾದ ಭೂಮಿಯನ್ನು ಹೊಂದಿರುವ ಆಸಕ್ತರು ಎಸ್.ಪಿ. ನೋಂದಣಿಯನ್ನು ಮಾಡಿಸಿಕೊಂಡು ಬಂದಲ್ಲಿ ಅವರಿಗೆ ಜವಳಿ ಪಾರ್ಕ್ ಸ್ಥಾಪಿಸಲು ಅವಕಾಶ ನೀಡಲಾಗುವುದೆಂದು ಸಚಿವರು ಭರವಸೆ ನೀಡಿದರು.

ಕೃಷಿ ಚಟುವಟಿಕೆಯನ್ನು ಹೊರತು ಪಡಿಸಿದರೆ ಜವಳಿ ಕ್ಷೇತ್ರದಲ್ಲಿ ಹೆಚ್ಚಿನ ಜನರು ಉದ್ಯೋಗವನ್ನು ಕಂಡುಕೊಳ್ಳುವುದರಿಂದ ಸರ್ಕಾರವು ಈಗಾಗಲೇ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನಲ್ಲಿ ಹಾಗೂ ಗುಲ್ಬರ್ಗಾ ಜಿಲ್ಲೆಯಲ್ಲಿ ಎರಡು ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಿದೆ. ಹಾಗೂ ಅದಕ್ಕೆ ಬೇಕಾದ ಮೂಲಭೂತ ಸೌಲಭ್ಯವನ್ನು ಒದಗಿಸಿಕೊಡಲಾಗಿದೆ. ನೇಕಾರರ ಸಂಖ್ಯೆ ಹೆಚ್ಚಿರುವ ಯಾದಗಿರಿ, ಶಹಾಪೂರ, ಹಿರಿಯೂರು, ಬಳ್ಳಾರಿ, ಬೆಳಗಾವಿ, ಇಳಕಲ್‌ನಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದೆ. ಹಾಗೆಯೇ ಹೊಸ ಜವಳಿ ನೀತಿಯಡಿ 5 ವರ್ಷಗಳಲ್ಲಿ 5 ಲಕ್ಷ ಜನರಿಗೆ ಉದ್ಯೋಗ ಒದಗಿಸುವ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

## ತುಂಗ ಭದ್ರಾ ನಾಲಾ ಆಧುನೀಕರಣ ವೆಚ್ಚದಲ್ಲಿ ಅಪವ್ಯಯವಾಗಿಲ್ಲ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ತುಂಗಭದ್ರಾ ನಾಲಾ ಆಧುನೀಕರಣಕ್ಕೆ ವೆಚ್ಚ ಮಾಡಲಾಗಿರುವ 340 ಕೋಟಿ ರೂ. ಗಳಲ್ಲಿ ಯಾವುದೇ ಅಪವ್ಯಯವಾಗಿಲ್ಲವೆಂದು ವಿಧಾನಪರಿಷತ್‌ನ ಸಭಾನಾಯಕರಾದ ಎಸ್.ಆರ್.ಪಾಟೀಲ್ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯರಾದ ವಿ.ಸೋಮಣ್ಣ ಕೇಳಿದ ಪ್ರಶ್ನೆಗೆ ಜಲಸಂಪನ್ಮೂಲ ಸಚಿವರ ಪರವಾಗಿ ಉತ್ತರಿಸಿದ ಅವರು ನಾಲಾ ಅಭಿವೃದ್ಧಿಯನ್ನು ಪ್ರತಿ ವರ್ಷವೂ ಮಾಡಲೇಬೇಕಾಗುತ್ತದೆ. ನಾಲೆಯಲ್ಲಿ ಹರಿಯುವ ನೀರು ಭೂಮಿಯಲ್ಲೆ ಇಂಗುವುದರಿಂದ ನಾಲೆಯ ಕೊನೆಯಲ್ಲಿರುವ ರೈತರ ಜಮೀನಿಗೆ ನೀರನ್ನು ಒದಗಿಸಲು ಸಾಧ್ಯವಾಗುವುದಿಲ್ಲ. ನಾಲೆಯ ಎರಡೂ ಬದಿಗೆ ಕಾಂಕ್ರಿಟ್ ಹಾಕಬೇಕಾಗುತ್ತದೆ. ಇದರಿಂದ ನೀರುನ್ನು ತ್ವರಿತವಾಗಿ ನಾಲೆಯ ಕೊನೆಯಲ್ಲಿರುವ ರೈತರ ಜಮೀನಿಗೆ ತಲುಪಿಸಲು ಸಾಧ್ಯವಾಗುತ್ತದೆ ಎಂದರು.

ನಾಲೆಯ ನೀರಿನ ಹರಿವು ಕಡಿಮೆಯಾಗುವ ಮೂರು ತಿಂಗಳ ಅವಧಿಯಲ್ಲಿಯೇ ಆಧುನೀಕರಣ ಕಾಮಗಾರಿಯನ್ನು ಕೈಗೆತ್ತಿಕೊಳ್ಳಬೇಕಾಗುತ್ತದೆ. ಕಾಮಗಾರಿಯ ಗುಣಮಟ್ಟವನ್ನು ಮೂರನೇ ವ್ಯಕ್ತಿಯಿಂದ ಪರಿಶೀಲಿಸಲಾಗುತ್ತಿರುವುದರಿಂದ ಕಾಮಗಾರಿಯ ಗುಣಮಟ್ಟ ಉತ್ತಮವಾಗಿರುತ್ತದೆ. ಕಾಮಗಾರಿಗೆ ವೆಚ್ಚ ಮಾಡಲಾಗಿರುವ ಹಣ ಸದ್ವಿನಿಯೋಗವಾಗಿದೆ. ಯಾವುದೇ ಕಾರಣಕ್ಕೂ ಸಾರ್ವಜನಿಕರ ಹಣ ದುರುಪಯೋಗವಾಗಲು ಸರ್ಕಾರ ಬಿಡುವುದಿಲ್ಲ. ಕಳೆದ ಎರಡು ವರ್ಷಗಳ ಹಿಂದೆಯೂ ಕ್ರಮವಾಗಿ 361 ಹಾಗೂ 360 ಕೋಟಿ ರೂ.ಗಳನ್ನು ತುಂಗಭದ್ರಾ ನಾಲೆಯ ಆಧುನಿಕರಣಕ್ಕಾಗಿ ವಿನಿಯೋಗ ಮಾಡಲಾಗಿದೆ ಎಂದು ಪಾಟೀಲ್ ಅವರು ಸದಸ್ಯರಿಗೆ ಮನವರಿಕೆ ಮಾಡಿಕೊಟ್ಟರು.

## ಕರ್ನಾಟಕದ ಮೂವರು ಅಂಧ ಕ್ರಿಕೆಟ್ ಆಟಗಾರರಿಗೆ 10 ಲಕ್ಷ ರೂ ನಗದು ಪುರಸ್ಕಾರ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಇತ್ತೀಚಿಗೆ ನಡೆದ ಅಂಧರ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ವಿಶ್ವಕಪ್ ಪಡೆದ ಭಾರತದ ಅಂಧರ ಕ್ರಿಕೆಟ್‌ನಲ್ಲಿದ್ದ ಕರ್ನಾಟಕದ ಮೂವರು ಕ್ರಿಕೆಟ್ ಆಟಗಾರರಿಗೆ ಸರ್ಕಾರದ ವತಿಯಿಂದ ತಲಾ 10 ಲಕ್ಷ ರೂ ನಗದು ಪುರಸ್ಕಾರವನ್ನು ನೀಡಲಾಗುವುದೆಂದು ಯುವಜನ ಸೇವಾ ಇಲಾಖೆ ಸಚಿವರಾದ ಬಾಬುರಾವ್ ಚಿಂಚನಸೂರ್ ಅವರು ತಿಳಿಸಿದರು.

ವಿಧಾನಪರಿಷತ್ತಿನಲ್ಲಿಂದು ಸದಸ್ಯೆ ತಾರಾ ಅನೂರಾಧ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರವು ರಾಷ್ಟ್ರ ಮತ್ತು ಅಂತರ ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಪದಕ ಗಳಿಸಿದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರವನ್ನು ನೀಡುವ ಮೂಲಕ ಸರ್ಕಾರವು ಕ್ರೀಡಾಪಟುಗಳಿಗೆ ಪ್ರೋತ್ಸಾಹವನ್ನು ನೀಡುತ್ತಿದೆ. ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಅವರಿಗೆ ಅಗತ್ಯವಿರುವ ಎಲ್ಲಾ ಸೌಲಭ್ಯವನ್ನು ಇಲಾಖೆಯಲ್ಲಿರುವ ಅನುದಾನದಡಿಯಲ್ಲಿ ಹಂತ ಹಂತವಾಗಿ ಒದಗಿಸಿಕೊಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

## ವಿಧಾನ ಪರಿಷತ್‌ನಲ್ಲಿ ಸಂತಾಪ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಪಾಕಿಸ್ತಾನದ ಪೇಶಾವರದಲ್ಲಿ ಬುಧವಾರ ತಾಲಿಬಾನ್ ಉಗ್ರರು ನಡೆಸಿದ ಮಕ್ಕಳ ಹತ್ಯಾಕಾಂಡವನ್ನು ವಿಧಾನ ಪರಿಷತ್‌ನಲ್ಲಿ ಸಭಾಪತಿ ಡಿ.ಎಲ್.ಶಂಕರಮೂರ್ತಿ ಅವರು ಖಂಡಿಸಿ ಸಂತಾಪ ವ್ಯಕ್ತಪಡಿಸಿದರು.

ಸದನ ಆರಂಭವಾಗುತ್ತಿದ್ದಂತೆಯೇ ಸಂತಾಪ ಸೂಚನೆ ಮಂಡಿಸಿ ನಂತರ ಒಂದು ನಿಮಿಷ ಮೌನಾಚರಣೆ ಆಚರಿಸಲಾಯಿತು. ತಾಲಿಬಾನ್ ಉಗ್ರರು ಮುಗ್ಧ ಮಕ್ಕಳ ಮೇಲೆ ನಡೆಸಿದ ಹತ್ಯಾಕಾಂಡ ಇಡೀ ಘೋರ ಅಪರಾಧವಾಗಿದ್ದು, ಅಮಾನವೀಯ ಕೃತ್ಯವನ್ನು ಎಲ್ಲರೂ ಖಂಡಿಸಬೇಕಾಗಿದೆ ಎಂದರು.

## ಕರ್ನಾಟಕದಲ್ಲಿ ಉದ್ದಿಮೆ ಸ್ಥಾಪನೆ ಕುರಿತು ಮಹಾರಾಷ್ಟ್ರ ಕೈಗಾರಿಕೋದ್ಯಮಿಗಳಿಂದ ಮುಖ್ಯಮಂತ್ರಿ ಭೇಟಿ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಕರ್ನಾಟಕದಲ್ಲಿ ಉದ್ದಿಮೆಗಳನ್ನು ಸ್ಥಾಪಿಸುವ ಕುರಿತಂತೆ ಮಹಾರಾಷ್ಟ್ರದ ಕೊಲ್ಲಾಪೂರ ಜಿಲ್ಲೆಯ ಗೋಕುಲ ಶಿರಗಾಂವ್ ಮ್ಯಾನುಫ್ಯಾಕ್ಚರರ್ಸ್ ಅಸೋಸಿಯೇಶನ್, ಮ್ಯಾನುಫ್ಯಾಕ್ಚರರ್ಸ್ ಅಸೋಸಿಯೇಶನ್ ಆಫ್ ಕಾಗಲಹತಕಣಂಗಲೆ ಮತ್ತು ಶಿರೋಳ್ ಮ್ಯಾನುಫ್ಯಾಕ್ಚರರ್ಸ್ ಅಸೋಸಿಯೇಶನ್ ಮುಂತಾದ ಕೈಗಾರಿಕಾ ಸಹಕಾರ ಸಂಘಗಳ ಪದಾಧಿಕಾರಿಗಳು ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಕರ್ನಾಟಕದಲ್ಲಿ ತಾವು ಉದ್ದಿಮೆಗಳನ್ನು ಸ್ಥಾಪಿಸಲು ಉತ್ಸುಕರಾಗಿದ್ದು, ಅದರಂತೆ ಸುಮಾರು 1486 ಉದ್ದಿಮೆದಾರರು ವಿವಿಧ ಕೈಗಾರಿಕಾ ಘಟಕಗಳನ್ನು ಆರಂಭಿಸಲು 1726ಎಕರೆ ಭೂಮಿ ಅವಶ್ಯಕತೆಯಿರುವುದಾಗಿ ತಿಳಿಸಿದರು. ಇದರಿಂದ 2ರಿಂದ ಎರಡುವರೆ ಸಾವಿರ ಕೋಟಿ ರೂ. ಬಂಡವಾಳ ಹೂಡಿಕೆಯಾಗಲಿದ್ದು, ಅಂದಾಜು 20ಸಾವಿರ ಜನರಿಗೆ ಉದ್ಯೋಗವಕಾಶ ದೊರೆಯಲಿದೆ ಎಂದು ಹೇಳಿದರು.

ಬೆಳಗಾವಿ ಜಿಲ್ಲೆಯಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸುವಂತೆ ಕೊಲ್ಲಾಪೂರದ ಕೈಗಾರಿಕೋದ್ಯಮಿಗಳಿಗೆ ಮುಖ್ಯಮಂತ್ರಿ ಆಹ್ವಾನ ನೀಡಿದರು. ಉದ್ದಿಮೆದಾರರಿಗೆ ಎಲ್ಲಾ ರೀತಿಯಿಂದಲೂ ಸರ್ಕಾರ ಸಹಕಾರ ನೀಡಲಿದೆ. ಈ ಕುರಿತು ಬೆಂಗಳೂರಿನಲ್ಲಿ ಸಧ್ಯದಲ್ಲಿಯೇ ಅಧಿಕಾರಿಗಳ ಸಭೆಯನ್ನು ನಡೆಸಲಾಗುವುದು ಎಂದು ಹೇಳಿದರು.

ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಲು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರತ್ನಪ್ರಭಾ ಅವರಿಗೆ ಮುಖ್ಯಮಂತ್ರಿ ಸೂಚನೆ ನೀಡಿದರು.

## ಜನವರಿ ಒಳಗಾಗಿ ಕೆರೆ ಒತ್ತುವರಿ ತೆರವು ಅಭಿಯಾನ: ಸಚಿವ ಶಿವರಾಜ ತಂಗಡಗಿ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ರಾಜ್ಯದ ವಿವಿಧೆಡೆಗಳಲ್ಲಿ ಒತ್ತುವರಿ ಮಾಡಿಕೊಂಡಿರುವ ಸಣ್ಣ ನೀರಾವರಿ ಕೆರೆಗಳನ್ನು ತೆರವುಗೊಳಿಸಲು ವಿಶೇಷ ಅಭಿಯಾನವನ್ನು ಜನವರಿ ತಿಂಗಳ ಅಂತ್ಯದ ಒಳಗಾಗಿ ಆರಂಭಿಸಲಾಗುವುದು ಎಂದು ಸಣ್ಣ ನೀರಾವರಿ ಸಚಿವ ಶಿವರಾಜ ತಂಗಡಿ ಹೇಳಿದರು.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ವೀರಕುಮಾರ್ ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೆರೆ ಒತ್ತುವರಿಯನ್ನು ಗುರುತಿಸಲು ರಾಜ್ಯದಾದ್ಯಂತ ಸರ್ವೇ ಕಾರ್ಯವನ್ನು ಆರಂಭಿಸಲಾಗಿದೆ. ಇದಕ್ಕಾಗಿ ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿದೆ. ಒತ್ತುವರಿಯಾಗಿರುವ ಎಲ್ಲಾ ಕೆರೆಗಳನ್ನು ತೆರವುಗೊಳಿಸಲಾಗುವುದು ಎಂದರು.

ಬೆಳಗಾವಿ ಜಿಲ್ಲೆಯಲ್ಲಿ 266ಕೆರೆಗಳು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿವೆ. ಈ ಪೈಕಿ 141ಕೆರೆಗಳ ಸರ್ವೇ ಕಾರ್ಯ ಪೂರ್ಣಗೊಳಿಸಲಾಗಿದ್ದು, 8ಕೆರೆಗಳ ಒತ್ತುವರಿಯಾಗಿರುವುದು ಕಂಡುಬಂದಿದೆ. ಎರಡು ಕೆರೆಗಳ 3.39ಹೆಕ್ಟೇರ್ ಪ್ರದೇಶವನ್ನು ಸ್ಥಳೀಯ ರೈತರು ಒತ್ತುವರಿ ಮಾಡಿಕೊಂಡಿದ್ದು, ಸದರಿ ಪ್ರದೇಶವನ್ನು ತೆರವುಗೊಳಿಸಲು ಕಂದಾಯ ಇಲಾಖೆಯನ್ನು ಕೋರಲಾಗಿದೆ ಎಂದು ಹೇಳಿದರು.

## ಹೈ.ಕ ಭಾಗದ 35 ತಹಶೀಲ್ದಾರ್ ನೇರ ನೇಮಕಾತಿ: ಸಚಿವ ಶ್ರೀನಿವಾಸ ಪ್ರಸಾದ್

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಹೈದ್ರಾಬಾದ್ ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ 371 ವಿಶೇಷ ನೇಮಕಾತಿಯಡಿ 35 ತಹಶೀಲ್ದಾರ್ ಗ್ರೇಡ್-2 ಹುದ್ದೆಗಳ ಭರ್ತಿಗೆ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಕಂದಾಯ ಸಚಿವ ಆರ್.ಶ್ರೀನಿವಾಸ ಪ್ರಸಾದ್ ತಿಳಿಸಿದ್ದಾರೆ.

ವಿಧಾನಪರಿಷತ್ ಸದಸ್ಯ ರಘುನಾಥ ಮಲ್ಕಾಪುರೆ ಅವರ ಪ್ರಶ್ನೆಗೆ ನೀಡಿದ ಲಿಖಿತ ಉತ್ತರದಲ್ಲಿ ಸಚಿವರು, ಈ ಭಾಗದಲ್ಲಿ ತಹಶೀಲ್ದಾರ್ ಗ್ರೇಡ್-1 ವೃಂದಕ್ಕೆ 12 ಅಧಿಕಾರಿಗಳಿಗೆ ಸ್ಥಾನಪನ್ನ ಬಡ್ತಿ ನೀಡಲಾಗಿದೆ. ಆರು ಜನ ಶಿರಸ್ತೇದಾರರಿಗೆ ಗ್ರೇಡ್-2 ತಹಶೀಲ್ದಾರ್ ಹುದ್ದೆಗೆ ಬಡ್ತಿ ನೀಡಲಾಗಿದೆ ಎಂದರು.

## ಎಲ್ಲಾ ಜಿಲ್ಲೆಗಳಲ್ಲಿ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರ ಆರಂಭ: ಸಚಿವ ಪರಮೇಶ್ವರ ನಾಯಕ್

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ನಿರುದ್ಯೋಗಿ ಯುವಕ ಯುವತಿಯರಿಗೆ ವೃತ್ತಿಕೌಶಲ್ಯ ಹಾಗೂ ಉದ್ಯೋಗವಕಾಶ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಈಗಾಗಲೇ 8ಜಿಲ್ಲೆಗಳಲ್ಲಿರುವ ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳನ್ನು ಇತರ ಜಿಲ್ಲೆಗಳಲ್ಲೂ ಆರಂಭಿಸಲಾಗುವುದು ಎಂದು ಕಾರ್ಮಿಕ ಖಾತೆ ಸಚಿವ ಪಿ.ಟಿ.ಪರಮೇಶ್ವರ ನಾಯಕ್ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯ ಮಹಾಂತೇಶ್ ಕವಟಗಿಮಠ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ಬೃಹತ್ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುತ್ತಿದೆ.

ಮುಂಬರುವ ದಿನಗಳಲ್ಲಿ ವಿದೇಶಿ ಕಂಪೆನಿಗಳನ್ನು ಸಹ ಆಹ್ವಾನಿಸಿ ಬೃಹತ್ ಉದ್ಯೋಗ ಮೇಳಗಳನ್ನು ಆಯೋಜಿಸುವುದರ ಮೂಲಕ ಉದ್ಯೋಗ ಸೃಷ್ಟಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

## ರಾಜ್ಯದ ಎಲ್ಲಾ ಪೋಡಿ ಪ್ರಕರಣ ಮಾರ್ಚ್ ಒಳಗಾಗಿ ಇತ್ಯರ್ಥ: ಸಚಿವ ಶ್ರೀನಿವಾಸ ಪ್ರಸಾದ್

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ರಾಜ್ಯದಲ್ಲಿ 3.69ಲಕ್ಷ ಪೋಡಿ ಪ್ರಕರಣಗಳು ಬಾಕಿಯಿದ್ದು, ಮಾರ್ಚ್ ಅಂತ್ಯದ ಒಳಗಾಗ ಎಲ್ಲಾ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗುವುದು ಎಂದು ಕಂದಾಯ ಖಾತೆ ಸಚಿವ ವಿ.ಶ್ರೀನಿವಾಸ್ ಪ್ರಸಾದ್ ವಿಧಾನ ಪರಿಷತ್ತಿನಲ್ಲಿಂದು ಹೇಳಿದರು.

ಸದಸ್ಯ ವೈ.ವಿ.ನಾರಾಯಣಸ್ವಾಮಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಂದಾಯ ಅದಾಲತ್‌ಗಳ ಮೂಲಕ ಪೋಡಿ ಪ್ರಕರಣ, ಪಹಣಿ ತಿದ್ದುಪಡಿ ಸೇರಿದಂತೆ ಭೂದಾಖಲೆಗಳನ್ನು ಸರಿಪಡಿಸುವ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಗಳಲ್ಲಿ ಪ್ರತಿ ತಿಂಗಳು 40ಕಂದಾಯ ಅದಾಲತ್‌ಗಳನ್ನು ನಡೆಸಲಾಗುತ್ತಿದೆ. ಹಳೆಯ ಭೂದಾಖಲೆಗಳನ್ನು ಸ್ಕ್ಯಾನ್ ಮಾಡಿ ಕಂಪ್ಯೂಟರೀಕರಣಗೊಳಿಸಲಾಗುತ್ತಿದೆ ಎಂದು ಹೇಳಿದರು.

## ಡಿ.19 ರಂದು ವಿವಿಧೋದ್ದೇಶ ಒಳಾಂಗಣ ಕ್ರೀಡಾಂಗಣಕ್ಕೆ ಅಡಿಗಲ್ಲು

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಬೆಳಗಾವಿಯಲ್ಲಿ ವಿವಿಧೋದ್ದೇಶ ಒಳಾಂಗಣ ನಿರ್ಮಾಣ ಕಾಮಗಾರಿಗೆ ಡಿಸೆಂಬರ್ 19ರಂದು ಬೆಳಿಗ್ಗೆ 9.30ಕ್ಕೆ ಕ್ರೀಡಾ ವಸತಿ ನಿಲಯ ಆವರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಯುವ ಸಬಲೀಕರಣ ಸಚಿವ ಕೆ. ಅಭಯಚಂದ್ರ ಹಾಗೂ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಉಪಸ್ಥಿತರಿರುವರು. ಬೆಳಗಾವಿ ಉತ್ತರ ಶಾಸಕ ಫಿರೋಜ್ ಎನ್ ಶೇಠ್ ಅಧ್ಯಕ್ಷತೆ ವಹಿಸುವರು.

## ನಾರಾಯಣಪುರ ದೋಣಿ ದುರಂತ ಪರಿಷತ್‌ನಲ್ಲಿ ಸಂತಾಪ

**ಬೆಳಗಾವಿ:ಡಿಸೆಂಬರ್:17:(ಕರ್ನಾಟಕ ವಾರ್ತೆ):-**

ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲೂಕಿನ ನಾರಾಯಣಪುರದ ಹಿನ್ನೀರಿನಲ್ಲಿ ಇಂದು ಬೆಳಿಗ್ಗೆ ಮದುವೆಗೆಂದು ದೋಣಿಯಲ್ಲಿ ಹೊರಟಿದ್ದ ಎರಡು ಮಕ್ಕಳು ಸೇರಿದಂತೆ 8 ಮಂದಿ ಪ್ರಯಾಣಿಕರು ನೀರಿನಲ್ಲಿ

ಮುಳುಗಿ ಸಾವನ್ನಪ್ಪಿರುವ ಘಟನೆಗೆ ಸಂಬಂಧಿಸಿದಂತೆ ಇಂದು ವಿಧಾನ ಪರಿಷತ್‌ನಲ್ಲಿ ಸಭಾನಾಯಕರಾದ ಎಸ್.ಆರ್.ಪಾಟೀಲ್ ಅವರು ಸಂತಾಪ ಸೂಚಿಸಿದರು.

ಬೆಳಿಗ್ಗೆ ನಡೆದಿರುವ ಈ ಘಟನೆಗೆ ಶೋಕ ವ್ಯಕ್ತಪಡಿಸಿದ ಸಚಿವರು ಮೃತರ ಕುಟುಂಬಕ್ಕೆ ಪರಿಹಾರ ನೀಡುವ ವಿಷಯವಾಗಿ ಮುಖ್ಯಮಂತ್ರಿಯವರೊಂದಿಗೆ ಸಮಾಲೋಚಿಸಿ ತೀರ್ಮಾನ ಕೈಗೊಳ್ಳಲಾಗುವುದೆಂದು ಸದನದಲ್ಲಿ ತಿಳಿಸಿದರು.

## ಬೆಳಗಾವಿ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಭೇಟಿ

**ಬೆಳಗಾವಿ:ಡಿಸೆಂಬರ:17:(ಕರ್ನಾಟಕ ವಾರ್ತೆ):-**

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಸುಭಾಶ. ಎಸ್.ಛಾಯಾಗೋಳ ಅವರು ಗುರುವಾರ ಡಿಸೆಂಬರ್ 18 ರಂದು ಬೆಳಿಗ್ಗೆ 10 ಗಂಟೆಗೆ ಬೆಳಗಾವಿಗೆ ಆಗಮಿಸಿ ಜಿಲ್ಲೆಯ ಗಡಿ ಗ್ರಾಮಗಳಿಗೆ ಭೇಟಿ ನೀಡಿ ಅಧಿವೇಶನದಲ್ಲಿ ಪಾಲ್ಗೊಂಡು ನಂತರ ಹುಬ್ಬಳ್ಳಿಗೆ ತೆರಳಿಲಿದ್ದಾರೆ.

## ವಿವಿಧೋದ್ದೇಶ ಒಳಾಂಗಣ ಕ್ರೀಡಾಂಗಣಕ್ಕೆ ಶಂಕುಸ್ಥಾಪನೆ

**ಬೆಳಗಾವಿ:ಡಿಸೆಂಬರ:17:(ಕರ್ನಾಟಕ ವಾರ್ತೆ):-**

ಬೆಳಗಾವಿಯಲ್ಲಿ ವಿವಿದ್ದೊದ್ದೇಶ ಒಳಾಂಗಣ ಕ್ರೀಡಾಂಗಣ ನಿರ್ಮಾಣ ಕಾಮಗಾರಿಗೆ ಶುಕ್ರವಾರ ಡಿಸೆಂಬರ್ 19 ರಂದು ಬೆಳಿಗ್ಗೆ 9-30 ಗಂಟೆಗೆ ಕೊಲ್ಲಾಪುರ ಸರ್ಕಲ್‌ನಲ್ಲಿರುವ ಕ್ರೀಡಾ ವಸತಿ ನಿಲಯದಲ್ಲಿ ರಾಜ್ಯದ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯ ನವದೆಹಲಿ, ಕರ್ನಾಟಕ ಸರಕಾರದ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ನಡೆಯುವ ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಹಾಗೂ ಅಬಕಾರಿ ಸಚಿವರಾದ ಶ್ರೀ ಸತೀಶ ಜಾರಕಿಹೊಳಿಯವರು ಹಾಗೂ ಯುವಸಬಲೀಕರಣ ಮತ್ತು ಮೀನುಗಾರಿಕೆ ರಾಜ್ಯ ಸಚಿವರಾದ ಶ್ರೀ ಕೆ. ಅಭಯಚಂದ್ರ ಅವರು ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಸರಕಾರದ ಮುಖ್ಯ ಸಚೇತಕರಾದ ಶ್ರೀ ಅಶೋಕ ಮ. ಪಟ್ಟಣ ಅವರು ಜಿಲ್ಲೆಯ ಸಂಸತ್ ಸದಸ್ಯರು, ರಾಜ್ಯಸಭಾ ಸದಸ್ಯರು, ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಮಹಾಪೌರರು, ಜಿಲ್ಲಾ ಪಂಚಾಯತ ಅಧ್ಯಕ್ಷರು, ಆರೋಗ್ಯ ಹಾಗೂ ಶಿಕ್ಷಣ ಸ್ಥಾಯಿ ಸಮಿತಿ ಅಧ್ಯಕ್ಷರು ಹಾಗೂ ಜನಪ್ರತಿನಿಧಿಗಳು ಮತ್ತು ರಾಜ್ಯದ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಬೆಳಗಾವಿ ಉತ್ತರ ಶಾಸಕ ಶ್ರೀ ಫಿರೋಜ್ ಎನ್. ಸೇಠ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.